**Akashvani : Bangalore**
**Regional Bulletin In Kannada**
**09.05.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

<u>ಮುಖ್ಯಾಂಶಗಳು</u>

**೧. ರಕ್ಷಣಾ ಕಾರ್ಯಾಚರಣೆ, ಭದ್ರತಾ ಪಡೆಗಳ ಚಲನೆ ಕುರಿತ ನೈಜಕಾಲದ ವರದಿ ಅಥವಾ ನೇರ ಪ್ರಸಾರ ಮಾಡದಂತೆ ಮಾಧ್ಯಮಗಳಿಗೆ ಕೇಂದ್ರ ಸರ್ಕಾರದ ಸೂಚನೆ**

**೨. ದೇಶದಲ್ಲಿ ಸಾಕಷ್ಟು ಆಹಾರ ಧಾನ್ಯ ಸಂಗ್ರಹವಿದ್ದು, ಯಾವುದೇ ತುರ್ತು ಪರಿಸ್ಥಿತಿಯಲ್ಲಿ ನಾಗರಿಕರು ಶಾಂತತೆ ಕಾಯ್ದುಕೊಳ್ಳುವಂತೆ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಮನವಿ**

**೩. ಆಪರೇಷನ್ ’ಸಿಂಧೂರ’ ಕಾರ್ಯಾಚರಣೆ ಬೆಂಬಲಿಸಿ ಬೆಂಗಳೂರಿನಲ್ಲಿ "ಜೈ ಹಿಂದ್ ತಿರಂಗಾ ಯಾತ್ರೆ"; ಸಾರ್ವಜನಿಕರಿಂದ ಭಾರಿ ಸ್ಪಂದನೆ**

**೪. ಅಮೆರಿಕದ ಕಾರ್ಡಿನಲ್ ಬಿಷಪ್ ರಾಬರ್ಟ್ ಫ್ರಾನ್ಸಿಸ್ ಪ್ರಿವೋಸ್ಟ್, ನೂತನ ಪೋಪ್ ಆಗಿ ಆಯ್ಕೆ- ಪ್ರಧಾನಿ ಶುಭಾಶಯ**

**೫. ಐಪಿಎಲ್ ಕ್ರಿಕೆಟ್; ಉಳಿದ ಪಂದ್ಯ ಒಂದು ವಾರ ಸ್ಥಗಿತ- ಬಿಸಿಸಿಐ ನಿರ್ಧಾರ**

**<><*<><>*><>**

ರಕ್ಷಣಾ ಕಾರ್ಯಾಚರಣೆ ಮತ್ತು ಭದ್ರತಾ ಪಡೆಗಳ ಚಲನೆ ಕುರಿತಂತೆ ಯಾವುದೇ ವ್ಯಕ್ತಿ, ಮಾಧ್ಯಮ ವಾಹಿನಿ, ಡಿಜಿಟಲ್ ವೇದಿಕೆ, ನೈಜಕಾಲದ ವರದಿ ಅಥವಾ ನೇರ ಪ್ರಸಾರಕ್ಕೆ ಮುಂದಾಗಬಾರದು ಎಂದು ಕೇಂದ್ರ ಸರ್ಕಾರ ಸೂಚಿಸಿದೆ. ಈ ರೀತಿಯ ಸೂಕ್ಷ್ಮ ಸಂವೇದನೆಯ ಮಾಹಿತಿಗಳು ಕಾರ್ಯಾಚರಣೆಯ ಪರಿಣಾಮಕ್ಕೆ ಅಡೆತಡೆ ಉಂಟುಮಾಡಬಹುದು ಹಾಗೂ ಜೀವಿಗಳನ್ನು ಅಪಾಯಕ್ಕೆ ತಳ್ಳಬಹುದು ಎನ್ನುವ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಈ ಹಿಂದಿನ ಸುತ್ತೋಲೆಯನ್ನು ರಕ್ಷಣಾ ಸಚಿವಾಲಯ ಸಾಮಾಜಿಕ ಮಾಧ್ಯಮದಲ್ಲಿ ಉಲ್ಲೇಖಿಸಿದೆ. ಕಾರ್ಗಿಲ್ ಯುದ್ಧ, ೨೬/೧೧ ರ ದಾಳಿ ಮತ್ತು ಕಂದಹಾರ್ ಅಪಹರಣ ಸಂದರ್ಭಗಳಲ್ಲಿ ವಿವೇಚನಾ ರಹಿತ ವರದಿಗಳು ತಂದೊಡ್ಡಿದ್ದ ಅಪಾಯಗಳನ್ನು ಸಚಿವಾಲಯ ಉಲ್ಲೇಖಿಸಿದೆ.

**<><*<><>*><>**

ದೇಶದಲ್ಲಿ ಆಹಾರ ಧಾನ್ಯ ಸಂಗ್ರಹ ಸಾಕಷ್ಟು ಇದೆ ಎಂದು ಕೇಂದ್ರ ಕೃಷಿ ಹಾಗೂ ರೈತ ಕಲ್ಯಾಣ ಖಾತೆ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ. ಯಾವುದೇ ತುರ್ತು ಪರಿಸ್ಥಿತಿಯಲ್ಲಿ ನಾಗರಿಕರು ಶಾಂತತೆ ಕಾಯ್ದುಕೊಳ್ಳಬೇಕು. ಆಹಾರ ಧಾನ್ಯದ ಬಂಪರ್ ಉತ್ಪಾದನೆ ಇದ್ದು, ಮುಂಬರುವ ಬೆಳೆ ಸುಗ್ಗಿ ಕೂಡ ಆಶಾದಾಯಕವಾಗಿದೆ ಎಂದು ತಿಳಿಸಿದ್ದಾರೆ. ಈ ಮಧ್ಯೆ ಕೇಂದ್ರ ಗ್ರಾಹಕ ಖಾತೆ ಸಚಿವ ಪ್ರಹ್ಲಾದ್ ಜೋಶಿ ಮಾತನಾಡಿ, ಅಗತ್ಯ ಸಾಮಗ್ರಿಗಳ ಮಾರಾಟದಲ್ಲಿ ತೊಡಗಿರುವ ವ್ಯಾಪಾರಸ್ಥರು, ಸಗಟು ಹಾಗೂ ಚಿಲ್ಲರೆ ವ್ಯಾಪಾರಸ್ಥರು ಕಾನೂನು ಜಾರಿ ಸಂಸ್ಥೆಗಳೊಂದಿಗೆ ಸಹಕರಿಸಬೇಕೆಂದು ನಿರ್ದೇಶಿಸಲಾಗಿದೆ. ಕಾಳಸಂತೆ ಅಥವಾ ಅಕ್ರಮ ದಾಸ್ತಾನು ಮಾಡುವವರ ವಿರುದ್ಧ ಕಾನೂನುರೀತ್ಯಾ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

<><*<><>*><>

ಪಹಲ್ಗಮ್ ಉಗ್ರಗಾಮಿ ಕೃತ್ಯಕ್ಕೆ ಪ್ರತೀಕಾರವಾಗಿ ಭಾರತೀಯ ಸೇನೆ ನಡೆಸುತ್ತಿರುವ ಆಪರೇಷನ್ 'ಸಿಂಧೂರ' ಕಾರ್ಯಾಚರಣೆಗೆ ಬೆಂಬಲ ಸೂಚಿಸಲು ರಾಜ್ಯ ಸರ್ಕಾರ, ಬೆಂಗಳೂರಿನಲ್ಲಿ ನಡೆಸಿದ "ಜೈ ಹಿಂದ್ ತಿರಂಗಾ ಯಾತ್ರೆ"ಗೆ ಸಾರ್ವಜನಿಕರಿಂದ ಭಾರಿ ಬೆಂಬಲ ವ್ಯಕ್ತವಾಯಿತು. ಕೆಆರ್ ಸರ್ಕಲ್ ನಿಂದ ಮಿನ್ಸ್ಕ್ ಚೌಕದವರೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ತಿರಂಗಾ ಯಾತ್ರೆ ನಡೆಯಿತು. ಈ ಯಾತ್ರೆಯಲ್ಲಿ ವಿದ್ಯಾರ್ಥಿಗಳು, ಸರ್ಕಾರಿ ನೌಕರರು ಸೇರಿದಂತೆ ಸುಮಾರು ೧೦ ಸಾವಿರಕ್ಕೂ ಹೆಚ್ಚು ಜನ ಭಾಗವಹಿಸಿ, ತ್ರಿವರ್ಣ ಧ್ವಜ ಹಿಡಿದು ಭಾರತ ಹಾಗೂ ಸೈನಿಕರ ಪರ ಘೋಷಣೆಗಳನ್ನು ಕೂಗಿದರು. ಆ ಮೂಲಕ ದೇಶದ ಭದ್ರತೆ ವಿಚಾರದಲ್ಲಿ ಎಲ್ಲರೂ ಒಟ್ಟಾಗಿ ನಿಲ್ಲುತ್ತೇವೆ. ಇಂತಹ ಪರಿಸ್ಥಿತಿಯಲ್ಲಿ ಕೇಂದ್ರ ಸರ್ಕಾರ ಹಾಗೂ ಭಾರತೀಯ ಸೇನಾ ಪಡೆಗಳಿಗೆ ಸಂಪೂರ್ಣ ಬೆಂಬಲ ಸೂಚಿಸುತ್ತೇವೆ ಎಂಬ ಸಂದೇಶ ರವಾನಿಸಲಾಯಿತು. ಯಾತ್ರೆ ವೇಳೆ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು, “ದೇಶದ ರಕ್ಷಣೆಗೆ ನಮ್ಮ ಯೋಧರು ಮಾಡುತ್ತಿರುವ ಹೋರಾಟಕ್ಕೆ ನಾವೆಲ್ಲರೂ ಬೆಂಬಲ ನೀಡಬೇಕು. ನಮ್ಮ ಸೈನಿಕರು ನಮ್ಮ ಹೆಮ್ಮೆ” ಎಂದು ಹೇಳಿದರು. ಈ ಸಂದರ್ಭದಲ್ಲಿ ಮಾಧ್ಯಮದೊಂದಿಗೆ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ “ಭಾರತ ಬಲಿಷ್ಠವಾಗಿದೆ, ಪಾಕಿಸ್ತಾನದ ದಾಳಿಯನ್ನು ಸಮರ್ಥವಾಗಿ ಎದುರಿಸಿ, ಮಟ್ಟಹಾಕಲಿದೆ” ಎಂದು ತಿಳಿಸಿದರು.

<><*<><>*><>

ಆಪರೇಷನ್ ಸಿಂದೂರ್ ಮೂಲಕ ಪ್ರತ್ಯುತ್ತರ ನೀಡುತ್ತಿರುವ ಭಾರತ ಸರ್ಕಾರದ ಕಾರ್ಯಾಚರಣೆ ಇಡೀ ದೇಶದ ಸ್ವಾಭಿಮಾನ ಮತ್ತು ಧೈರ್ಯವನ್ನು ಹೆಚ್ಚಿಸಿದೆ ಎಂದು ರಾಷ್ಟ್ರೀಯ ಸ್ವಯಂಸೇವಕ ಸಂಘ ತಿಳಿಸಿದೆ. ಸೇನಾ ಕಾರ್ಯಾಚರಣೆಯು ಭಾರತ ದೇಶದ ಭದ್ರತೆಗೆ ಅಗತ್ಯ ಮತ್ತು ಅನಿವಾರ್ಯ ಕ್ರಮವಾಗಿದೆ. ರಾಷ್ಟ್ರೀಯ ಸಂಕಷ್ಟದ ಈ ಘಳಿಗೆಯಲ್ಲಿ, ಇಡೀ ದೇಶವು ತನು-ಮನ-ಧನದಿಂದ ಸರ್ಕಾರ ಮತ್ತು ಸೇನಾಪಡೆಗಳ ಜೊತೆಗೆ ಒಗ್ಗಟ್ಟಾಗಿ ನಿಂತಿದೆ ಎಂದು ಸರಸಂಘಚಾಲಕ  ಡಾ.ಮೋಹನ ಭಾಗವತ್ ಹಾಗೂ ಸರಕಾರ್ಯವಾಹ ದತ್ತಾತ್ರೇಯ ಹೊಸಬಾಳೆ ತಿಳಿಸಿದ್ದಾರೆ.

**<><*<><>*><>**

ದೇಶದಾದ್ಯಂತ ಕಟ್ಟೆಚ್ಚರ ಹಿನ್ನಲೆಯಲ್ಲಿ ಬಂಗಾರಪೇಟೆ ರೈಲ್ವೆ ನಿಲ್ದಾಣದಲ್ಲಿ ಪೊಲೀಸ್ ಮತ್ತು ಆರ್.ಪಿ.ಎಫ್ ಸಿಬ್ಬಂದಿ ತೀವ್ರ ತಪಾಸಣೆ ನಡೆಸುತ್ತಿದೆ.  ಬೆಂಗಳೂರು ಮತ್ತು ಉತ್ತರ ಭಾರತ ಕಡೆ ಬಂಗಾರಪೇಟೆ ಮಾರ್ಗವಾಗಿ ಬಹಳ ರೈಲುಗಳು ಚಲಿಸುತ್ತಿರುವುದರಿಂದ ಶ್ವಾನದಳ ದೊಂದಿಗೆ ಪೊಲೀಸ್ ಮತ್ತು ಆರ್.ಪಿ.ಎಫ್ ಸಿಬ್ಬಂದಿ ಜಂಟಿಯಾಗಿ ಕಾರ್ಯಾಚರಣೆ ನಡೆಸುತ್ತಿದ್ದು, ಭಾರೀ ಮುನ್ನೆಚ್ಚರಿಕೆ ವಹಿಸಲಾಗುತ್ತಿದೆ. ರೈಲ್ವೆ ನಿಲ್ದಾಣದ ಹೊರಗಡೆ ಮತ್ತು ಒಳಗಡೆ ಹೆಚ್ಚಿನ ನಿಗಾ ವಹಿಸಿದ್ದಾರೆ. ಅನುಮಾನಾಸ್ಪದ ಪ್ರಯಾಣಿಕರ ಹಾಗು ಲಗ್ಗೇಜ್ ಗಳನ್ನು ಪರಿಶೀಲಿಸಲಾಗುತ್ತಿದೆ.

**<><*<><>*><>**

ಅಮೇರಿಕದ ಕಾರ್ಡಿನಲ್ ಬಿಷಪ್ ರಾಬರ್ಟ್ ಫ್ರಾನ್ಸಿಸ್ ಪ್ರಿವೋಸ್ಟ್ ಅವರು ರೋಮನ್ ಕ್ಯಾಥೋಲಿಕ್ ಚರ್ಚ್‌ನ ನೂತನ ಪೋಪ್ ಆಗಿ ಗುರುವಾರ ಆಯ್ಕೆ ಆಗಿದ್ದಾರೆ.  ಕ್ಯಾಥೋಲಿಕ್ ಚರ್ಚ್ ನ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಅಮೇರಿಕದ  ಬಿಷಪ್ ಒಬ್ಬರು ಈ ಉನ್ನತ ಹುದ್ದೆಯನ್ನ ಅಲಂಕರಿಸಿದ್ದಾರೆ. ನೂತನ ಪೋಪ್ ಅವರನ್ನು ಇನ್ನು ಮುಂದೆ ಪೋಪ್ ಲಿಯೋ - ೧೪ ಎಂಬ ಹೆಸರಿನಿಂದ ಕರೆಯಲಾಗುವುದು.  ೬೯ ವರ್ಷದ ಪ್ರಿವೋಸ್ಟ್ ಚಿಕಾಗೋದಲ್ಲಿ ಜನಿಸಿದರು. ೨೦೨೩ ರಲ್ಲಿ ಅವರನ್ನು ವ್ಯಾಟಿಕನ್ ಕಾರ್ಡಿನಲ್ ಆಗಿ ನೇಮಕ ಮಾಡಿಕೊಳ್ಳಲಾಗಿತ್ತು. ನೂತನ ಪೋಪ್ ಆಗಿ ಆಯ್ಕೆ ಆದ ನಂತರ ವ್ಯಾಟಿಕನ್ ಬಾಲ್ಕನಿ ಯಿಂದ ನೆರೆದಿದ್ದ ಜನರನ್ನು ಉದ್ದೇಶಿಸಿ ಮಾತಾನಾಡಿದ ಪ್ರಿವೋಸ್ಟ್ ಜಗತ್ತಿನಲ್ಲಿ ಶಾಂತಿಯನ್ನು ಸ್ಥಾಪಿಸಲು ಎಲ್ಲರೂ ಪರಸ್ಪರ ಕೈ ಜೋಡಿಸಬೇಕೆಂದು ಕರೆ ನೀಡಿದರು.  ನೂತನ ಪೋಪ್ ಆಯ್ಕೆಗೆ ವಿಶ್ವದ ನಾನ ದೇಶಗಳನ್ನ ಪ್ರತಿನಿಧಿಸುವ ೧೩೩ ಕಾರ್ಡಿನಲ್‌ಗಳು ಸಭೆ ಸೇರಿದ್ದರು. ಈ ಪೈಕಿ ೨ನೇ ೩ರಷ್ಟು ಮತಗಳ ಅಂತರದಿಂದ ನೂತನ ಪೋಪ್ ಆಗಿ ಪ್ರಿವೋಸ್ಟ್ ಆಯ್ಕೆ ಆಗಿದ್ದಾರೆ.

**<><*<><>*><>**

ಪ್ರಧಾನಮಂತ್ರಿ ನರೇಂದ್ರ ಮೋದಿ ಭಾರತದ ಜನತೆ ಪರವಾಗಿ ಪೋಪ್ ಲಿಯೊ-೧೪ ಅವರಿಗೆ ಶುಭಾಶಯ ಕೋರಿದ್ದಾರೆ. ಶಾಂತಿ, ಸಾಮರಸ್ಯ, ಐಕ್ಯಮತ್ಯ ಮತ್ತು ಸೇವೆಯ ಆದರ್ಶಗಳು ಅತ್ಯಂತ ಮಹತ್ವವಿರುವ ಈ ಸಂದರ್ಭದಲ್ಲಿ ಪೋಪ್ ಲಿಯೊ-೧೪ ಅವರು ಬಹು ಮಹತ್ವದ ಮುಂದಾಳತ್ವ ವಹಿಸುತ್ತಿದ್ದಾರೆ. ಪೋಪ್ ಅವರ ಪವಿತ್ರ ಸನ್ನಿದಾನಕ್ಕೆ ಭಾರತದ ಬದ್ಧತೆ ಮುಂದುವರಿಯುತ್ತದೆ ಎಂದು ಪ್ರಧಾನಿ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.

**<><*<><>*><>**

ಆಧುನಿಕ ಕೃಷಿ ತಂತ್ರಜ್ಞಾನ ಮತ್ತು ಹೊಸ ಬೀಜ ತಳಿ ಕುರಿತಂತೆ ರೈತರಲ್ಲಿ ಅರಿವು ಮೂಡಿಸಲು ಇದೇ ತಿಂಗಳ ೨೯ ರಿಂದ ೧೫ ದಿನಗಳ ಕಾಲ ದೇಶಾದ್ಯಂತ ವಿಕಸಿತ ಸಂಕಲ್ಪ ಕೃಷಿ ಅಭಿಯಾನ ನಡೆಸಲಾಗುವುದು ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ. ಕೃಷಿ ಮುಂಗಾರು ಆಂದೋಲನಾ ಕುರಿತಾದ ರಾಷ್ಟ್ರೀಯ ಸಮಾವೇಶದಲ್ಲಿ ಮಾತನಾಡಿದ ಅವರು, ದೇಶದ ೭೦೦ ಜಿಲ್ಲೆಗಳಲ್ಲಿ ಈ ಅಭಿಯಾನ ಕೈಗೊಳ್ಳಲಾಗುತ್ತಿದ್ದು, ಕೇಂದ್ರ ಸರ್ಕಾರ, ರಾಜ್ಯ ಸರ್ಕಾರಗಳ ಸಹಯೋಗದಲ್ಲಿ ಕೃಷಿ ವಿಜ್ಞಾನಿಗಳು, ಪ್ರಗತಿಪರ ರೈತರು, ಅಧಿಕಾರಿಗಳನ್ನೊಳಗೊಂಡ ಎರಡು ಸಾವಿರ ತಂಡಗಳನ್ನು ರಚಿಸಲಿದೆ. ಅಭಿಯಾನದ ಸಂದರ್ಭದಲ್ಲಿ ಜಿಲ್ಲಾಮಟ್ಟದಲ್ಲಿ ಪ್ರತಿದಿನ ಮೂರು ಸಭೆಗಳನ್ನು ನಡೆಸಿ, ಸುಮಾರು ೧೦ ರಿಂದ ೧೨ ಲಕ್ಷ ರೈತರಿಗೆ ಮಾಹಿತಿ ಒದಗಿಸಲಾಗುವುದು ಎಂದು ಕೇಂದ್ರ ಕೃಷಿ ಸಚಿವರು ತಿಳಿಸಿದರು.

**<><*<><>*><>**

ನವದೆಹಲಿಯಲ್ಲಿ ನಡೆಯುತ್ತಿರುವ ಖೇಲೋ ಇಂಡಿಯಾ ಕ್ರೀಡೆಯ ಶೂಟಿಂಗ್ ಪಂದ್ಯದಲ್ಲಿ ರಾಜ್ಯದ ಹೃದ್ಯಶ್ರೀ ಕೊಂಡೂರ ಮತ್ತು ನರೇನ್ ಪ್ರಣವ್ ಬೆಳ್ಳಿ ಪದಕ ಗೆದ್ದಿದ್ದಾರೆ. ೧೦ ಮೀಟರ್ ಏರ್ ರೈಫಲ್ ಮಿಶ್ರ ತಂಡ ಯುವ ವಿಭಾಗದಲ್ಲಿ ರಾಜ್ಯದ ಶೂಟರ್‌ಗಳು ಈ ಸಾಧನೆ ಮಾಡಿದ್ದಾರೆ.

**<><*<><>*><>**

ಭಾರತದ ಕ್ರಿಕೆಟ್ ನಿಯಂತ್ರಣಾ ಮಂಡಳಿ ಬಿಸಿಸಿಐ, ಐಪಿಎಲ್ ಕ್ರಿಕೆಟ್-೨೦೨೫ ರ ಉಳಿದ ಪಂದ್ಯಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಒಂದು ವಾರ ಕಾಲ ಸ್ಥಗಿತಗೊಳಿಸಿದೆ. ಭಾರತ-ಪಾಕಿಸ್ತಾನ ನಡುವಿನ ಉದ್ವಿಗ್ನ ಪರಿಸ್ಥಿತಿ ಹಿನ್ನೆಲೆಯಲ್ಲಿ ಐಪಿಎಲ್ ಆಡಳಿತ ಮಂಡಳಿ ಸಂಬಂಧಪಟ್ಟ ಪ್ರತಿನಿಧಿಗಳೊಂದಿಗೆ ಚರ್ಚೆ ನಡೆಸಿದ ನಂತರ ಈ ನಿರ್ಧಾರಕ್ಕೆ ಬಂದಿರುವುದಾಗಿ ತಿಳಿಸಿದೆ. ಸಮಗ್ರ ಪರಿಸ್ಥಿತಿ ಪರಾಮರ್ಶೆ ನಂತರ ಸಂಬಂಧಪಟ್ಟವರ ಜೊತೆ ಸಮಾಲೋಚನೆ ನಡೆಸಿ,

ಮುಂದಿನ ಪರಿಷ್ಕೃತ ವೇಳಾಪಟ್ಟಿ ಹಾಗೂ ಸ್ಥಳಗಳ ಬಗ್ಗೆ ಪ್ರಕಟಿಸಲಾಗುವುದು ಎಂದು ಬಿಸಿಸಿಐ ಹೇಳಿಕೆಯಲ್ಲಿ ತಿಳಿಸಿದೆ.

**<><*<><>*><>**

ಸುಹಾಸ್ ಶೆಟ್ಟಿ ಹತ್ಯೆ ಪ್ರಕರಣವನ್ನು ಎನ್‌ಐಎಗೆ ವಹಿಸಬೇಕೆಂದು ರಾಜ್ಯ ವಿಧಾನಸಭೆ ಪ್ರತಿಪಕ್ಷ ನಾಯಕ ಆರ್.ಅಶೋಕ ನೇತೃತ್ವದ ನಿಯೋಗ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರಿಗೆ ಮನವಿ ಸಲ್ಲಿಸಿದೆ.

**<><*<><>*><>**

ಕಾರವಾರದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರಿಗೆ ಗೃಹಭಾಗ್ಯ ಯೋಜನೆಯಡಿ ಮನೆಗಳನ್ನು ನಿರ್ಮಾಣ ಮಾಡಿಕೊಡುವ ಕಾರ್ಯವನ್ನು ಶೀಘ್ರದಲ್ಲಿ ಮುಕ್ತಾಯಗೊಳಿಸುವಂತೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ಸೂಚನೆ ನೀಡಿದರು. ಅವರು ಕಾರವಾರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಸ್ವಚ್ಛತಾ ಕರ್ಮಚಾರಿಗಳ ಜಿಲ್ಲಾ ಮಟ್ಟದ ಜಾಗೃತ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**